ಕಾಲೋನಿಗಳನ್ನು ರಾಜೀವ್ ಗಾಂಧಿ ಗ್ರಾಮೀಣ ವಿದ್ಯುದೀಕರಣ ಯೋಜನೆಯಡಿಯಲ್ಲಿ ವಿದ್ಯುದೀಕರಿಸಲು ಮಂಗಳೂರು ವಿದ್ಯುತ್ ಸರಬರಾಜು ಕಂಪನಿಯು ಉದ್ದೇಶಿಸಿದೆ.

31, (129) ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ನೀಡುತ್ತಿರುವ ಅನುದಾನದ ವಿವರಗಳೇನು;

ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹಣವನ್ನು ಈ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆ;

ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸ್ಥಳೀಯ ಸಂಸ್ಥೆಗಳಿಗೆ ಒದಗಿಸಲಾದ ಮೂಲಭೂತ ಸೌಕರ್ಯಗಳು ಯಾವುವು;

ಈ) ಬೆಳ್ತಂಗಡಿ ಪಟ್ಟಣ ಪಂಚಾಯತ್‌ಗೆ ಕಳೆದ ಎರಡು ವರ್ಷಗಳಲ್ಲಿ ಅನುಷ್ಠಾನಗೊಳಿಸಿದ ಮೂಲಭೂತ ಸೌಕರ್ಯಗಳು ಯಾವುವು;

ಉ) ಬೆಳ್ತಂಗಡಿ ಪಟ್ಟಣ ಪಂಚಾಯತ್ ಪ್ರದೇಶಾಭಿವೃದ್ಧಿಗಾಗಿ ಸರ್ಕಾರದವರು ಕೈಗೊಳ್ಳಲುದ್ದೇಶಿಸಿರುವ ಮೂಲಭೂತ ಸೌಕರ್ಯಾಭಿವೃದ್ಧಿಯ ಯೋಜನೆಗಳು ಯಾವುವು (ವಿವರ ನೀಡುವುದು)?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಎಸ್.ಎಫ್.ಸಿ. ಅಭಿವೃದ್ಧಿ ಅನುದಾನ 11ನೇ ಹಣಕಾಸು ಯೋಜನೆ ಮತ್ತು 12ನೇ ಹಣಕಾಸು ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಮಾಡುತ್ತಿದೆ.

ಆ) 2004–05 ಮತ್ತು 2005–06ನೇ ಸಾಲಿನಲ್ಲಿ ರಾಜ್ಯದಲ್ಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಅಭಿವೃದ್ಧಿಗಾಗಿ ಅನುದಾನವನ್ನು ಈ ಕೆಳಕಂಡಂತೆ ಬಿಡುಗಡೆ ಮಾಡಲಾಗಿದೆ.

ಕ್ರ. ಸಂ.	ಲೆಕ್ಕಶೀರ್ಷಿಕೆ	2004–05	2005–06
1.	ಎಸ್.ಎಫ್.ಸಿ ಅಭಿವೃದ್ಧಿ ಅನುದಾನ	34,33,18,220	38,51,000/–
2.	11ನೇ ಹಣಕಾಸು ಯೋಜನೆ	170,43,76,019/–	--------

3. 12ನೇ ಹಣಕಾಸು
ಯೋಜನೆ -------- 12,92,00,000/-

ಇ) **ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸ್ಥಳೀಯ ಸಂಸ್ಥೆಗಳು ಏಳು :**

1. **ಮೂಡಬಿದ್ರೆ ಪುರಸಭೆ :** ಸಾರ್ವಜನಿಕ ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿ, ಮಳೆನೀರು ಚರಂಡಿ ಅಭಿವೃದ್ಧಿ ಕಾಮಗಾರಿಗಳು, ದಾರಿದೀಪ ಅಳವಡಿಕೆ ಕಾಮಗಾರಿಗಳು, ಅಕ್ಷರ ದಾಸೋಹ ಕಾರ್ಯಕ್ರಮದಡಿ ಅಡುಗೆ ಕೋಣೆ ನಿರ್ಮಾಣ, ರಸ್ತೆ ಅಭಿವೃದ್ಧಿ ಕಾಮಗಾರಿಗಳು, ಕಾಲುದಾರಿ ಅಭಿವೃದ್ಧಿ ಕಾಮಗಾರಿಗಳು.

2. **ಪುತ್ತೂರು ಪುರಸಭೆ :** 19 ರಸ್ತೆಗಳು, ಚರಂಡಿಗಳ ಅಭಿವೃದ್ಧಿ, ಅಕ್ಷರ ದಾಸೋಹ ಅಡುಗೆ ಕೋಣೆಗಳ ನಿರ್ಮಾಣ.

3. **ಉಳ್ಳಾಲ ನಗರ ಪಂಚಾಯತ್ :** ರಸ್ತೆ ಅಭಿವೃದ್ಧಿ ಕಾಮಗಾರಿಗಳು, ಚರಂಡಿಗಳ ಕಾಮಗಾರಿಗಳು, ಅಕ್ಷರ ದಾಸೋಹ ಅಡುಗೆ ಕೋಣೆಗಳ ನಿರ್ಮಾಣ ಕಾಮಗಾರಿಗಳು.

4. **ಬಂಟ್ವಾಳ ನಗರ ಪಂಚಾಯತ್ :** ರಸ್ತೆ ಅಭಿವೃದ್ಧಿ ಕಾಮಗಾರಿಗಳು, ಚರಂಡಿಗಳ ಕಾಮಗಾರಿಗಳು, ಅಕ್ಷರ ದಾಸೋಹ ಅಡುಗೆ ಕೋಣೆಗಳ ನಿರ್ಮಾಣ ಕಾಮಗಾರಿಗಳು.

5. **ಸುಳ್ಯ ನಗರ ಪಂಚಾಯತ್ :** ರಸ್ತೆ ಅಭಿವೃದ್ಧಿ ಕಾಮಗಾರಿಗಳು, ಚರಂಡಿಗಳ ಕಾಮಗಾರಿಗಳು, ಅಕ್ಷರ ದಾಸೋಹ, ಅಡುಗೆ ಕೋಣೆಗಳ ನಿರ್ಮಾಣ ಕಾಮಗಾರಿಗಳು.

6. **ಬೆಳ್ತಂಗಡಿ ನಗರ ಪಂಚಾಯತ್ :** ಕುಡಿಯುವ ನೀರಿನ ಕಾಮಗಾರಿಗಳು ಮಳೆಗಾಲದ ನೀರು ಹರಿದು ಹೋಗುವ ಚರಂಡಿ ರಚನೆ ಕಾಮಗಾರಿ, ಅಕ್ಷರ ದಾಸೋಹ ಅಡುಗೆ ಕೋಣೆ ನಿರ್ಮಾಣ, ಬೀದಿ ದೀಪಗಳು ಮತ್ತು ರಸ್ತೆ ಅಭಿವೃದ್ಧಿ ಕಾಮಗಾರಿ.

7. **ಮುಲ್ಕಿ ಪಟ್ಟಣ ಪಂಚಾಯತ್ :** ರಸ್ತೆಗಳು, ದಾರಿ ದೀಪಗಳು, ಕುಡಿಯುವ ನೀರು, ಅಕ್ಷರ ದಾಸೋಹ ಅಡುಗೆ ಕೋಣೆ ನಿರ್ಮಾಣ ಕಾಮಗಾರಿಗಳು.

ಈ) ಬೆಳ್ತಂಗಡಿ ಪಟ್ಟಣ ಪಂಚಾಯತ್‌ಗೆ 2004-05ನೇ ಸಾಲಿನಲ್ಲಿ 11ನೇ ಹಣಕಾಸು ಯೋಜನೆಯಡಿ ರೂ.37.28 ಲಕ್ಷಗಳು ಬಿಡುಗಡೆಯಾಗಿದ್ದು, ಈ ಕೆಳಗಿನಂತೆ ಕಾಮಗಾರಿಗಳಿಗೆ ವಿನಿಯೋಗಿಸಲಾಗಿದೆ.

ಕ್ರ.ಸಂ.	ಕಾಮಗಾರಿಗಳ ವಿವರ	ರೂಪಾಯಿಗಳು
1.	ಕುಡಿಯುವ ನೀರಿನ ವ್ಯವಸ್ಥೆ	77,000/-

2.	ಮಳೆಗಾಲದ ನೀರು ಹರಿದು ಹೋಗುವ ಚರಂಡಿ ಯೋಜನೆ	17,54,840/-
3.	ಅಕ್ಷರ ದಾಸೋಹ ಅಡುಗೆ ಕೋಣೆ ನಿರ್ಮಾಣ	205,784/-
4.	ಬೀದಿ ದೀಪಗಳಿಗಾಗಿ	3,88,699/-
5.	ರಸ್ತೆ ಅಭಿವೃದ್ಧಿ	13,79,970/-
	ಒಟ್ಟು	**3,806,293/-**

2005-06ನೇ ಸಾಲಿನಲ್ಲಿ 12ನೇ ಹಣಕಾಸು ಆಯೋಗದ ಅನುದಾನ ರೂ. 2.43 ಲಕ್ಷ ಬಿಡುಗಡೆಯಾಗಿದೆ.

ಉ)ಸರ್ಕಾರವು ಯಾವುದೇ ಯೋಜನೆಯನ್ನು ಹಮ್ಮಿಕೊಂಡಿರುವುದಿಲ್ಲ.

32, (98) ಶ್ರೀ ಎಸ್.ರಾಜೇಂದ್ರನ್(ಕೆ.ಜಿ.ಎಫ್) : ಮಾನ್ಯ ಸಾರಿಗೆ ಸಚಿವರುಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಸಾರಿಗೆ ಇಲಾಖೆ ಹಾಗೂ ಸಾರಿಗೆ ಇಲಾಖೆ ಅಡಿಯಲ್ಲಿ ಬರುವ ಕಂಪೆನಿ, ನಿಗಮ ಹಾಗೂ ಮಂಡಳಿಗಳಲ್ಲಿ ಗುರುತಿಸಲಾಗಿರುವ ಹಿಂಬಾಕಿ ಹುದ್ದೆಗಳ ಸಂಖ್ಯೆ ಎಷ್ಟು;

ಆ) ಹಾಗಿದ್ದಲ್ಲಿ ಈ ಹುದ್ದೆಗಳು ತುಂಬದಿರಲು ಕಾರಣವೇನು?

ಶ್ರೀ ಎನ್. ಚಲುವರಾಯಸ್ವಾಮಿ ಸಾರಿಗೆ ಸಚಿವರುಗಳು

ಅ) ಸಾರಿಗೆ ಇಲಾಖೆ ಮತ್ತು ಸಾರಿಗೆ ಸಂಸ್ಥೆಗಳಾದ ವಾಯುವ್ಯ ಕರ್ನಾಟಕರಸ್ತೆ ಸಾರಿಗೆ ಸಂಸ್ಥೆ, ಈಶಾನ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳಲ್ಲಿ ಇದ್ದ ಬ್ಯಾಕ್‌ಲಾಗ್ (ಪ.ಜಾ ಮತ್ತು ಪ.ಪಂ.) ಹುದ್ದೆಗಳನ್ನು ಈಗಾಗಲೇ ಭರ್ತಿ ಮಾಡಲಾಗಿದ್ದು ಈಗ ಬಾಕಿ ಇರುವುದಿಲ್ಲ.

ಆ) ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಈ ಹಿಂದೆ ಇದ್ದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು ಈಗ 251 ಬ್ಯಾಕ್‌ಲಾಗ್ ಹುದ್ದೆಗಳು ಇದ್ದು ಇವುಗಳನ್ನು ಭರ್ತಿ ಮಾಡುವ ಬಗ್ಗೆ ಕ್ರಮ ತೆಗೆದು ಕೊಳ್ಳಲಾಗುತ್ತಿದೆ.

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಈ ಹಿಂದೆ ಇದ್ದ ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು ಈಗ 40 ಬ್ಯಾಕ್‌ಲಾಗ್ (ಪ.ಜಾ) ಹುದ್ದೆಗಳು ಬಾಕಿ ಇರುತ್ತದೆ. ದಿನಾಂಕ:02.02.2006 ಪ್ರಕಟಿಸಿರುವ ಚಾಲಕ ಕಂ ನಿರ್ವಾಹಕ ಹುದ್ದೆಯ ಆಯ್ಕೆ ಸಂದರ್ಭದಲ್ಲಿ ಈ ಬ್ಯಾಕ್‌ಲಾಗ್